# <u>ಕರ್ನಾಟಕ ವಿಧಾನ ಪರಿಷತ್ತು</u>

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ, ಶ್ರೀ ಕೇಶವ ಪ್ರಸಾದ್ ಎಸ್, ಇವರು ಸಂಯುಕ್ತ ಕರ್ನಾಟಕ ಪತ್ರಿಕೆಯಲ್ಲಿ 'ಒಂದು ವರ್ಷದಲ್ಲಿ೧೩,೨೩೫ ಮಂದಿಗೆ ಹಾವು ಕಡಿತ!' ಎಂಬ ತಲೆಬರಹದಡಿಯಲ್ಲಿ ಪ್ರಕಟಗೊಂಡ ವರದಿಯನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

೨೦೨೪ನೇ ಸಾಲಿನಲ್ಲಿ ರಾಜ್ಯದಲ್ಲಿ ಹಾವು ಕಡಿತದ ಪ್ರಕರಣಗಳು ಗಂಭೀರವಾಗಿ ಏರಿಕೆಗೊಂಡಿದ್ದು, ಕೇವಲ ಒಂದು ವರ್ಷದ ಅವಧಿಯಲ್ಲಿ ೧೩,೨೩೫ ಜನರು ಹಾವು ಕಡಿತಕ್ಕೆ ಒಳಗಾಗಿರುವುದಾಗಿ ಅಧಿಕೃತ ಮಾಹಿತಿ ಲಭ್ಯವಾಗಿದೆ. ಹಾವು ಕಡಿತದಿಂದ ಕನಿಷ್ಠ ೧೦೦ ಮಂದಿ ಸಾವನ್ನಪ್ಪಿರುವುದೂ ಆತಂಕಕಾರಿ ಸಂಗತಿಯಾಗಿದೆ. ೨೦೨೩ರಲ್ಲಿ ಇಂತಹ ಪ್ರಕರಣಗಳು ೬,೫೯೬ ಇದ್ದರೆ, ೨೦೨೨ರಲ್ಲಿ ೩,೪೩೯ ಪ್ರಕರಣಗಳು ದಾಖಲಾಗಿದ್ದವು. ಈ ಅಂಕಿಅಂಶಗಳಿಂದಾಗಿ ರಾಜ್ಯದಲ್ಲಿ ಹಾವು ಕಡಿತ ಪ್ರಕರಣಗಳು ವರ್ಷದಿಂದ ವರ್ಷಕ್ಕೆ  ಎರಡು ಪಟ್ಟು ಹೆಚ್ಚುತ್ತಾ ಬರುತ್ತಿರುವುದು ಸ್ಪಷ್ಟವಾಗಿದೆ.

ಹಾವು ಕಡಿತ ಪ್ರಕರಣಗಳು ಗ್ರಾಮೀಣ ಹಾಗೂ ನಗರ ಪ್ರದೇಶಗಳೆರಡರಲ್ಲೂ ಹೆಚ್ಚುತ್ತಿರುವುದರ ಜೊತೆಗೆ, ಚಿಕಿತ್ಸೆಗಾಗಿ ಸಮಯಕ್ಕೆ ಸರಿಯಾಗಿ ಅಗತ್ಯ ಸೌಲಭ್ಯಗಳು ದೊರೆಯದೆ ಹಲವರು ಸಾವನ್ನಪ್ಪುತ್ತಿದ್ದಾರೆ. ತಜ್ಞರ ಪ್ರಕಾರ, ಹಾವು ಕಡಿತದ ನಂತರ ೪೫ ರಿಂದ ೬೦ ನಿಮಿಷಗಳೊಳಗೆ ಸೂಕ್ತ ಚಿಕಿತ್ಸೆ ದೊರೆತರೆ ಜೀವ ಉಳಿಯಬಹುದಾದರೂ, ಆಸ್ಪತ್ರೆಗಳಿಗೆ ತಲುಪುವಲ್ಲಿ ವಿಳಂಬ ಹಾಗೂ ಪ್ರಾಥಮಿಕ ಚಿಕಿತ್ಸೆಯ ಕೊರತೆ ಹಿನ್ನೆಲೆಯಲ್ಲಿ ಅಮೂಲ್ಯ ಜೀವಗಳು ಹಾಳಾಗುತ್ತಿವೆ.

ಇನ್ನೊಂದು ಪ್ರಮುಖ ವಿಷಯವೆಂದರೆ, ಹಾವು ಕಡಿತ ಪ್ರಕರಣಗಳಲ್ಲಿ ಜಿಲ್ಲಾವಾರು ಅಂಕಿಅಂಶಗಳ ಸಂಗ್ರಹಣೆ, ಚಿಕಿತ್ಸೆಗಾಗಿ ಅಗತ್ಯವಿರುವ ಪ್ರತಿವಿಷ ಲಸಿಕೆಗಳ ಲಭ್ಯತೆ, ಹಾಗೂ ವೈದ್ಯಕೀಯ ಸಿಬ್ಬಂದಿಯ ಸಜ್ಜುಗೊಳಿಸುವಿಕೆಯಲ್ಲಿ ಇನ್ನೂ ಹಲವು ಕೊರತೆಗಳು ಕಂಡುಬರುತ್ತಿದೆ. ಆದ್ದರಿಂದ, ಸರ್ಕಾರವು ಈ ಕೆಳಗಿನ ಕ್ರಮಗಳನ್ನು ತಕ್ಷಣ ಕೈಗೊಳ್ಳುವುದು ಅಗತ್ಯ:

1. ಹಾವು ಕಡಿತ ಪ್ರಕರಣಗಳು ಹೆಚ್ಚು ಸಂಭವಿಸುವ ಜಿಲ್ಲೆಗಳ ಗುರುತಿಸಿ ವಿಶೇಷ ಕ್ರಮ ಜಾರಿಗೆ ತರುವುದು. ಪ್ರತಿಯೊಂದು ತಾಲ್ಲೂಕು ಮತ್ತು ತಾಲೂಕು ಆಸ್ಪತ್ರೆಗಳಲ್ಲಿ ಸಾಕಷ್ಟು ಪ್ರತಿವಿಷ ಲಸಿಕೆಗಳನ್ನು ಲಭ್ಯವಾಗುವಂತೆ ಮಾಡುವುದು.
2. ಪ್ರಾಥಮಿಕ ಆರೋಗ್ಯ ಕೇಂದ್ರ ಮಟ್ಟದಲ್ಲೇ ತುರ್ತು ಚಿಕಿತ್ಸಾ ವ್ಯವಸ್ಥೆ ಹಾಗೂ ತರಬೇತಿ ಪಡೆದ ಸಿಬ್ಬಂದಿಯನ್ನು ನಿಯೋಜಿಸುವುದು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಹಾವು ಕಡಿತದ ಸಂದರ್ಭ ತಕ್ಷಣ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಜನಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.
3. ಹಾವು ಕಡತದಿಂದಾಗಿ ಸಂಭವಿಸುವ ಸಾವುಗಳನ್ನು ತಡೆಗಟ್ಟುವ ದೃಷ್ಟಿಯಿಂದ ತುರ್ತು ಅಂಬ್ಯುಲೆನ್ಸ್ ಹಾಗೂ ತ್ವರಿತ ಚಿಕಿತ್ಸೆ ವ್ಯವಸ್ಥೆ ಸಕ್ರಿಯಗೊಳಿಸುವುದು.

**ಮಾನವ ಜೀವಕ್ಕೆ ಧಕ್ಕೆಯಾಗುತ್ತಿರುವ ಈ ಗಂಭೀರ ವಿಷಯದಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಂಡು ಜೀವ ಉಳಿಸುವ ಕೆಲಸದಲ್ಲಿ ನಿರ್ಲಕ್ಷ್ಯ ತೋರಬಾರದೆಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಬಗ್ಗೆ.**

**ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-**

*****

ರಾಜ್ಯದಲ್ಲಿ 2024 ರಲ್ಲಿ ಒಟ್ಟು 13,235 ಹಾವು ಕಡಿತದ ಪ್ರಕರಣಗಳು ಹಾಗೂ 100 ಮರಣಗಳು IHIP (Integrated Health Information Platform) ನಲ್ಲಿ ವರದಿಯಾಗಿರುತ್ತವೆ.

2022 ರಲ್ಲಿ ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕಾರ್ಯಕ್ರಮವು ಕರ್ನಾಟಕದಲ್ಲಿ ಅನುಷ್ಠಾನಗೊಂಡಿದ್ದು, 2024 ಫೆಬ್ರವರಿಯ ಮೊದಲು ಹಾವು ಕಡಿತ ಹಾಗೂ ಮರಣದ ನೈಜ ಪ್ರಕರಣಗಳು ವರದಿಯಾಗದೇ ಇದರ ಮಾಹಿತಿಯು ಸಮರ್ಪಕವಾಗಿರುವುದಿಲ್ಲ. ದಿನಾಂಕ 12.02.2024 ರಂದು ದೇಶದಲ್ಲೇ ಪ್ರಪ್ರಥಮ ಬಾರಿಗೆ ರಾಜ್ಯ ಸರ್ಕಾರವು ಹಾವು ಕಡಿತ ಪ್ರಕರಣಗಳು ಹಾಗೂ ಮರಣಗಳನ್ನು ಘೋಷಿತ ಖಾಯಿಲೆಯೆಂದು (Notifiable Disease) ಆದೇಶ ಹೊರಡಿಸಿದೆ. ಹಾಗೂ ಎಲ್ಲಾ ಹಾವು ಕಡಿತ ಹಾಗೂ ಮರಣ ಪ್ರಕರಣಗಳನ್ನು ಖಾಸಗಿ ಆಸ್ಪತ್ರೆಗಳನ್ನೊಳಗೊಂಡಂತೆ ಎಲ್ಲಾ ಆರೋಗ್ಯ ಕೇಂದ್ರಗಳು ಕಡ್ಡಾಯವಾಗಿ ಕೇಂದ್ರ ಸರ್ಕಾರದ IHIP (Integrated Health Information Platform) ಯಲ್ಲಿ ವರದಿ ಮಾಡಲು ಸೂಚಿಸಲಾಗಿರುವುದರಿಂದ 2023 ರ ಪ್ರಕರಣಗಳಿಗೆ ಹೋಲಿಸಿದರೆ 2024 ರಲ್ಲಿ ಹೆಚ್ಚು ಪ್ರಕರಣಗಳು ವರದಿಯಾಗಿರುತ್ತವೆ. ಯಾವುದೇ ಖಾಸಗಿ ಆಸ್ಪತ್ರೆ ಅಥವಾ ಸರ್ಕಾರಿ ಆಸ್ಪತ್ರೆಯಲ್ಲಿ ಹಾವು ಕಡಿತ ಪ್ರಕರಣ ಹಾಗೂ ಮರಣಗಳನ್ನು ವರದಿ ಮಾಡದೇ ಇರುವುದು ಅಥವಾ ವರದಿ ಮಾಡುವುದು ತಡವಾದರೆ ಕರ್ನಾಟಕ ಸಾಂಕ್ರಾಮಿಕ ರೋಗಗಳ ಖಾಯಿಲೆ 2020, ಸೆಕ್ಷನ್ 3 ರನ್ವಯ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

ಉಲ್ಲೇಖಿತ ವಿಷಯವಾದ ಹಾವು ಕಡಿತದ ನಂತರ 45 ರಿಂದ 60 ನಿಮಿಷದೊಳಗೆ ಚಿಕಿತ್ಸೆ ದೊರೆತರೆ ಜೀವ ಉಳಿಸಬಹುದಾಗಿರುತ್ತದೆ.

ಹಾವು ಕಡಿತ ಪ್ರಕರಣಗಳು ಹಾಗೂ ಮರಣಗಳನ್ನು ತಡೆಗಟ್ಟಲು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ

1. ದೇಶದಲ್ಲೇ ಪ್ರಪ್ರಥಮ ಬಾರಿಗೆ ಕರ್ನಾಟಕ ಸಾಂಕ್ರಾಮಿಕ ರೋಗಗಳ ಖಾಯಿಲೆ 2020, ಸೆಕ್ಷನ್ 3 ರನ್ವಯ ಹಾವು ಕಡಿತ ಹಾಗೂ ಮರಣಗಳನ್ನು ಘೋಷಿತ ಖಾಯಿಲೆಯೆಂದು ದಿನಾಂಕ 12.02.2024 ರಂದು ಆದೇಶ ಹೊರಡಿಸಲಾಗಿದೆ. ಹಾಗೂ ಎಲ್ಲಾ ಹಾವು ಕಡಿತ ಹಾಗೂ ಮರಣ ಪ್ರಕರಣಗಳನ್ನು ಖಾಸಗಿ ಆಸ್ಪತ್ರೆಗಳನ್ನೊಳಗೊಂಡಂತೆ ಎಲ್ಲಾ ಕೇಂದ್ರಗಳು ಕಡ್ಡಾಯವಾಗಿ ಕೇಂದ್ರ ಸರ್ಕಾರದ IHIP (Integrated Health Information Platform) ಯಲ್ಲಿ ವರದಿ ಮಾಡಲು ಸೂಚಿಸಲಾಗಿದೆ. ಇದರಿಂದ ನೈಜ ಪ್ರಕರಣಗಳಲ್ಲಿ ಏರಿಕೆಯಾಗದಿದ್ದರೂ ಕೂಡ ವರದಿಯಾಗುತ್ತಿರುವ ಸಂಖ್ಯೆ ಹೆಚ್ಚಾಗಿರುತ್ತದೆ.

2. ರಾಜ್ಯದ ಎಲ್ಲಾ ತಾಲ್ಲೂಕು ಹಾಗೂ ಜಿಲ್ಲಾಸ್ಪತ್ರೆಗಳನ್ನು ಹಾವು ಕಡಿತ ಚಿಕಿತ್ಸಾ ಕೇಂದ್ರಗಳಾಗಿ ಗುರುತಿಸಿಲಾಗಿದ್ದು, ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಹಾವು ಕಡಿತಕ್ಕೆ ನೀಡಲಾಗುವ Anti Snake Venom (ASV) ಅನ್ನು ಹಾಗೂ ಇತರೆ ಔಷಧಿಗಳನ್ನು ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಇರಿಸಿಕೊಳ್ಳಲು ಸೂಚಿಸಲಾಗಿದೆ. Anti Snake Venom (ASV) ಅನ್ನು Essential Durg list ಅಡಿಯಲ್ಲಿ ಸೇರಿಸಿ ರಾಜ್ಯದಿಂದ KSMSCL (Karnataka State Medical Supplies Corporation Ltd) ಮುಖಾಂತರ ASV ಯನ್ನು ಸಾಕಷ್ಟು ಪ್ರಮಾಣದಲ್ಲಿ ವಿತರಿಸಲಾಗಿದೆ.
3. ಎಲ್ಲಾ ವೈದ್ಯಾಧಿಕಾರಿಗಳಿಗೆ ಹಾಗೂ ಎಲ್ಲಾ ಆರೋಗ್ಯ ಸಿಬ್ಬಂದಿಗಳಿಗೆ ಹಾವು ಕಡಿತದ ಚಿಕಿತ್ಸೆ ಬಗ್ಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. ತಾಲ್ಲೂಕು ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಯ ಫಿಜಿಷಿಯನ್‌ಗಳಿಗೆ ಹಾವು ಕಡಿತದಿಂದ ಸಂಭವಿಸುವ ಇತರೆ ತೊಡಕುಗಳಿಗೆ ಚಿಕಿತ್ಸೆ ನೀಡಲು ತರಬೇತಿಯನ್ನು ನೀಡಲಾಗಿದೆ.
4. IEC – ರಾಜ್ಯದಿಂದ ನೀಡಿರುವ IEC Posters ಹಾಗೂ ವಿಡಿಯೋಗಳನ್ನು ಉಪಯೋಗಿಸಿ IEC ಚಟುವಟಿಕೆಗಳನ್ನು ನಡೆಸಿ, ಸಮುದಾಯದಲ್ಲಿ ಹಾವು ಕಡಿತದ ಬಗ್ಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳಲು ಜಿಲ್ಲೆಗಳಿಗೆ ಸೂಚಿಸಲಾಗಿದೆ. ಸ್ಥಳೀಯ ಮಟ್ಟದಲ್ಲಿ ಗ್ರಾಮ ಪಂಚಾಯಿತಿ, NGOಗಳು, ಸಾಂಪ್ರದಾಯಕ ನಾಟಿ ಚಿಕಿತ್ಸಕರು ಹಾಗೂ ಇತರೆ ಸ್ಥಳೀಯ ಮುಖಂಡರು ಒಳಗೊಂಡಂತೆ ಇತರೆ ಇಲಾಖೆಗಳ ಸಹಯೋಗದೊಂದಿಗೆ IEC ಚಟುವಟಿಕೆಗಳನ್ನು ನಡೆಸಲು ಹಾಗೂ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರಿಗೆ ಸಮುದಾಯದಲ್ಲಿ ಹಾವು ಕಡಿತದ ಬಗ್ಗೆ ಅರಿವು ಮೂಡಿಸಲು ತಿಳಿಸಲಾಗಿದೆ.
5. ದಿನಾಂಕ 10.07.2024 ರಂದು ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ರಾಜ್ಯ ಕ್ರಿಯಾತಂತ್ರ ರಚಿಸಲು ಅಂತರ್ ಇಲಾಖಾ ಕಾರ್ಯಾಗಾರವನ್ನು ನಡೆಸಿ, ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣದಲ್ಲಿ ತಮ್ಮ ತಮ್ಮ ಇಲಾಖೆಗಳ ಜವಾಬ್ದಾರಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ (ಅರಣ್ಯ ಇಲಾಖೆ, ಕೃಷಿ ಇಲಾಖೆ, ಪಶುಸಂಗೋಪನಾ ಹಾಗೂ ಮೀನುಗಾರಿಕೆ ಇಲಾಖೆ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆ, ಇತರೆ) ವಿವರಿಸಲಾಯಿತು. ಹಾವು ಕಡಿತ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಕಾರ್ಯಕ್ರಮದ ರಾಜ್ಯ ಕ್ರಿಯಾತಂತ್ರ ತಯಾರಿಕೆ ಪ್ರಗತಿಯಲ್ಲಿರುತ್ತದೆ.
6. ಹಾವು ಕಡಿತದ ಎಲ್ಲಾ ಮರಣಗಳನ್ನು ಕಡ್ಡಾಯವಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ Death Audit ಮಾಡಿ ವರದಿ ನೀಡಲು ಸೂಚಿಸಲಾಗಿದೆ. ಮರಣಗಳನ್ನು ತಡೆಗಟ್ಟಲು ಜಿಲ್ಲೆಗಳಿಗೆ ಪಾಲಿಸಬೇಕಾದ ಕ್ರಮಗಳನ್ನು ತಿಳಿಸಲಾಗಿದೆ. ಹಾವು ಕಡಿತ ಪ್ರಕರಣಗಳನ್ನು ತಡೆಗಟ್ಟಲು ಹಾಗೂ

ಮರಣಗಳನ್ನು ನಿಯಂತ್ರಿಸಲು, ಜಿಲ್ಲಾಧಿಕಾರಿಗಳಿಗೆ ಕಾರ್ಯಕ್ರಮದ ಪರಿಶೀಲನೆ ಹಾಗೂ ಹಾವು ಕಡಿತದಿಂದ ಸಂಭವಿಸುವ ಮರಣಗಳ ಲೆಕ್ಕ ಪರಿಶೋಧನೆಯ ಜವಾಬ್ದಾರಿಯನ್ನು ವಹಿಸಲಾಗಿದೆ. ಕಾರ್ಯಕ್ರಮ ಅನುಷ್ಠಾನಕ್ಕೆ ಕಂಡು ಬರುವ ಸವಾಲುಗಳನ್ನು ಸರಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಅಧಿಕಾರವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ.

7. ವರದಿಯಾಗಿರುವ ಮರಣಗಳನ್ನು ಪರಿಶೀಲಿಸಿದಾಗ, ಅಧಿಕ ಪ್ರಕರಣಗಳಲ್ಲಿ ಸಾಂಪ್ರದಾಯಕ ನಾಟಿ ಚಿಕಿತ್ಸಕರಿಗೆ ಭೇಟಿ ನೀಡಿ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿರುವುದು ಕಂಡು ಬಂದಿರುತ್ತದೆ. ಹಾಗಾಗಿ ಸಾಂಪ್ರದಾಯಕ/ ನಾಟಿ ಚಿಕಿತ್ಸಕರು ಹಾವು ಕಡಿತ ಪ್ರಕರಣಗಳಲ್ಲಿ ಚಿಕಿತ್ಸೆ ನೀಡಿ ಇದರಿಂದ ರೋಗಿಯು ನಿರ್ಣಾಯಕ ಚಿಕಿತ್ಸೆಗೆ ಆಸ್ಪತ್ರೆ ತಲುಪಲು ತಡವಾದರೆ ಅಥವಾ ರೋಗಿಯು ಮರಣ ಹೊಂದಿದರೆ, ಇಂತವರ ಮೇಲೆ **KPME Act** ಅಡಿಯಲ್ಲಿ ಶಿಸ್ತು ಕ್ರಮ ಜರುಗಿಸಬಹುದಾಗಿರುತ್ತದೆ.
8. ಹಾವು ಕಡಿತ ಪ್ರಕರಣಗಳು ಯಾವ ಆಸ್ಪತ್ರೆಗೆ ಚಿಕಿತ್ಸೆಗೆ ಭೇಟಿ ನೀಡಬೇಕೆಂದು ಮ್ಯಾಪಿಂಗ್ ಮಾಡಲು ಹಾಗೂ ತಮ್ಮ ಕೇಂದ್ರದಲ್ಲಿ ಬರುವಂತಹ high risk area ಹಾಗೂ high risk population ಅನ್ನು ಗುರುತಿಸಿ, ಅಲ್ಲಿ ತೀವ್ರ ನಿಗಾವಹಿಸಲು ಮತ್ತು ಅಂತರ್ ಇಲಾಖಾ IEC ಚಟುವಟಿಕೆಗಳನ್ನು ನಡೆಸಲು ಸೂಚಿಸಲಾಗಿದೆ.

**ಆಕುಕ 157 ಎಸ್ಎಂಎಂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**